National
Kannada
04.10.2025 7.35 p.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ದೇಶಾದ್ಯಂತ ಒಂದು ಸಾವಿರ ಸರ್ಕಾರಿ ಐಟಿಐಗಳ ಮೇಲ್ದರ್ಜೆಗೇರಿಸುವ ಪಿಎಂ-ಸೇತುಗೆ ಪ್ರಧಾನಿ ಚಾಲನೆ

೨. 'ನಿಮ್ಮ ಆಸ್ತಿ, ನಿಮ್ಮ ಅಧಿಕಾರ' ಅಭಿಯಾನಕ್ಕೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

೩. ಹಿಂಸಾಚಾರವನ್ನು ತ್ಯಜಿಸಿ, ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಮಾವೋವಾದಿಗಳಿಗೆ ಕೇಂದ್ರ ಗೃಹ ಸಚಿವರ ಮನವಿ

೪. ಟೆಸ್ಟ್ ಕ್ರಿಕೆಟ್: ಮೊದಲ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಜಯ

><><><><><

ನವದೆಹಲಿಯಲ್ಲಿಂದು ೬೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವಿವಿಧ ಯುವ-ಕೇಂದ್ರಿತ ಉಪಕ್ರಮಗಳನ್ನು ಪ್ರಧಾನಿ ನರೇಂದ್ರ ಮೋದಿ ಅನಾವರಣಗೊಳಿಸಿದರು. ಯುವ ಕೌಶಲ್ಯಕ್ಕಾಗಿ ಒಂದು ಐತಿಹಾಸಿಕ ಉಪಕ್ರಮದಲ್ಲಿ, ದೇಶಾದ್ಯಂತ ಒಂದು ಸಾವಿರ ಸರ್ಕಾರಿ ಐಟಿಐಗಳ ಮೇಲ್ದರ್ಜೆಗೇರಿಸುವ ಪಿಎಂ-ಸೇತುಗೆ ಪ್ರಧಾನಿ ಚಾಲನೆ ನೀಡಿದರು. ನವದೆಹಲಿಯಲ್ಲಿ ನಡೆದ ಕೌಶಲ್ ದೀಕ್ಷಾಂತ್ ಸಮಾರಂಭದಲ್ಲಿ ಪ್ರಧಾನಿ, ಅಖಿಲ ಭಾರತ ವ್ಯಾಪಾರ ಪರೀಕ್ಷೆ - ಎಐಟಿಟಿ ೨೦೨೫ರಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಪ್ರದಾನ ಮಾಡಿದರು. ಬಳಿಕ ವರ್ಚುವಲ್ ಮೂಲಕ ಪ್ರಧಾನಿ, ಬಿಹಾರದ ಅಭಿವೃದ್ಧಿಗಾಗಿ ಹಲವು ಉಪಕ್ರಮಗಳಿಗೆ ಚಾಲನೆ ನೀಡಿದರು. ಇದರ ಭಾಗವಾಗಿ ಬಿಹಾರದ ಪರಿಷ್ಕೃತ ಮುಖ್ಯಮಂತ್ರಿ ನಿಶ್ಚಯ್ ಸ್ವಯಂ ಸಹಾಯತ ಭತ್ಯ ಯೋಜನೆಯನ್ನು ಉದ್ಘಾಟಿಸಲಾಯಿತು. ಇದು ಐದು ಲಕ್ಷ ಪದವೀಧರರಿಗೆ ಎರಡು ವರ್ಷಗಳ ಕಾಲ ಒಂದು ಸಾವಿರ ರೂಪಾಯಿಗಳ ಮಾಸಿಕ ಭತ್ಯೆ ಒದಗಿಸುತ್ತದೆ. ಕೈಗಾರಿಕಾ ಆಧಾರಿತ ಕೋರ್ಸ್‌ಗಳು ಮತ್ತು ವೃತ್ತಿಪರ ಶಿಕ್ಷಣವನ್ನು ಉತ್ತೇಜಿಸಲು

ಬಿಹಾರದಲ್ಲಿ ಜನ್ ನಾಯಕ್ ಕರ್ಪೂರಿ ಠಾಕೂರ್ ಕೌಶಲ್ಯ ವಿಶ್ವವಿದ್ಯಾಲಯವನ್ನು ಪ್ರಧಾನಿ, ಉದ್ಘಾಟಿಸಿದರು. ಬಿಹಾರದ ನಾಲ್ಕು ವಿಶ್ವವಿದ್ಯಾಲಯಗಳಲ್ಲಿ ಹೊಸ ಶೈಕ್ಷಣಿಕ ಮತ್ತು ಸಂಶೋಧನಾ ಸೌಲಭ್ಯಗಳಿಗೆ ಅವರು ಶಂಕುಸ್ಥಾಪನೆ ನೆರವೇರಿಸಿದರು. ಬಿಹ್ತಾದಲ್ಲಿ ಎನ್‌ಐಟಿ ಪಾಟ್ನಾದ ಹೊಸ ಕ್ಯಾಂಪಸ್ ಅನ್ನು ಲೋಕಾರ್ಪಣೆ ಮಾಡಿದರು. ೩೪ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೪೦೦ ನವೋದಯ ವಿದ್ಯಾಲಯಗಳು ಮತ್ತು ೨೦೦ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಸ್ಥಾಪಿಸಲಾದ ಒಂದು ಸಾವಿರದ ಇನ್ನೂರು ವೃತ್ತಿಪರ ಕೌಶಲ್ಯ ಪ್ರಯೋಗಾಲಯಗಳನ್ನು ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು.

><><><><

ಗುಜರಾತ್‌ನ ಗಾಂಧಿನಗರದಲ್ಲಿ ಇಂದು ರಾಷ್ಟ್ರವ್ಯಾಪಿ 'ನಿಮ್ಮ ಆಸ್ತಿ, ನಿಮ್ಮ ಅಧಿಕಾರ' ಅಭಿಯಾನಕ್ಕೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ ನೀಡಿದರು. ಹಣಕಾಸು ವ್ಯವಸ್ಥೆಯ ವಿವಿಧ ವಲಯಗಳಲ್ಲಿ ಇರುವ ಹಕ್ಕು ಪಡೆಯದ ಹಣಕಾಸು ಸ್ವತ್ತುಗಳ ತ್ವರಿತ ಇತ್ಯರ್ಥವನ್ನು ಸುಗಮಗೊಳಿಸುವ ಉದ್ದೇಶವನ್ನು ಈ ಅಭಿಯಾನ ಹೊಂದಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವೆ ನಿರ್ಮಲಾ ಸೀತಾರಾಮನ್, ಈ ಅಭಿಯಾನವು ಹಕ್ಕು ಪಡೆಯದ ಠೇವಣಿಗಳನ್ನು ಅವರ ಕಾನೂನುಬದ್ಧ ಹಕ್ಕುದಾರರಿಗೆ ಹಿಂದಿರುಗಿಸುವುದನ್ನು ಖಚಿತಪಡಿಸುತ್ತದೆ ಎಂದು ಹೇಳಿದರು. ಫಲಾನುಭವಿಗಳಿಗೆ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಈ ಉಪಕ್ರಮದ ಬಗ್ಗೆ ಜಾಗೃತಿ ಮೂಡಿಸಲು ಅವರು ಒತ್ತಾಯಿಸಿದರು. ಹಣಕಾಸು ಸಂಸ್ಥೆಗಳು ಮತ್ತು ಹಕ್ಕು ಪಡೆಯುವವರ ನಡುವಿನ ಅಂತರವನ್ನು ಕಡಿಮೆ ಮಾಡುವ ಮಹತ್ವವನ್ನು ಒತ್ತಿ ಹೇಳಿದ ಅವರು, ಜನರ ಆರ್ಥಿಕ ಸಬಲೀಕರಣಕ್ಕೆ ಈ ಹೆಜ್ಜೆ ನಿರ್ಣಾಯಕವಾಗಿದೆ ಎಂದು ಹೇಳಿದರು ಮುಂದಿನ ಮೂರು ತಿಂಗಳುಗಳಲ್ಲಿ, ಈ ಅಭಿಯಾನವು ದೇಶದ ಪ್ರತಿಯೊಂದು ಜಿಲ್ಲೆಯನ್ನು ಒಳಗೊಳ್ಳುತ್ತದೆ. ಬ್ಯಾಂಕುಗಳು, ವಿಮಾ ಕಂಪನಿಗಳು, ಪಿಂಚಣಿ ನಿಧಿಗಳು ಹಾಗೂ ಷೇರು ಮತ್ತು ಮ್ಯೂಚುವಲ್ ಫಂಡ್ ಕಂಪನಿಗಳು ಹೊಂದಿರುವ ಹಕ್ಕು ಪಡೆಯದ ಆಸ್ತಿಗಳ ಸುಲಭ ಮತ್ತು ತ್ವರಿತ ಪರಿಹಾರದ ಮೇಲೆ ಇದು ಗಮನಹರಿಸುತ್ತದೆ. ಒಂದು ಲಕ್ಷ ೮೨ ಸಾವಿರ ಕೋಟಿ ಮೌಲ್ಯದ ಹಕ್ಕು ಪಡೆಯದ ಆಸ್ತಿಗಳು ಪ್ರಸ್ತುತ ದೇಶಾದ್ಯಂತ ವಿವಿಧ ಹಣಕಾಸು ಸಂಸ್ಥೆಗಳಲ್ಲಿವೆ.

><><><><

ಮುಂದಿನ ವರ್ಷ ಮಾರ್ಚ್ ೩೧ ರೊಳಗೆ ದೇಶವನ್ನು ಎಡಪಂಥೀಯ ಉಗ್ರವಾದದಿಂದ ಮುಕ್ತಗೊಳಿಸುವ ಕೇಂದ್ರ ಸರ್ಕಾರದ ಸಂಕಲ್ಪವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಪುನರುಚ್ಚರಿಸಿದ್ದಾರೆ. ಹಿಂಸಾಚಾರವನ್ನು ತ್ಯಜಿಸಿ ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಮಾವೋವಾದಿಗಳಿಗೆ ಮನವಿ ಮಾಡಿದ ಅವರು, ಸಶಸ್ತ್ರ ಹೋರಾಟದ ಹಾದಿಯನ್ನು ಮುಂದುವರಿಸುವವರು ಭದ್ರತಾ ಪಡೆಗಳಿಂದ ಕಠಿಣ ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಛತ್ತೀಸ್‌ಗಢದ ಜಗದಲ್‌ಪುರದಲ್ಲಿ ಇಂದು ನಡೆದ ಬಸ್ತರ್ ದಸರಾ ಲೋಕೋತ್ಸವವನ್ನು ಉದ್ದೇಶಿಸಿ ಮಾತನಾಡಿದ ಸಚಿವ ಅಮಿತ್ ಶಾ, ನಕ್ಸಲಿಸಂ ಸಮಸ್ಯೆಯಿಂದಾಗಿ ಬಸ್ತರ್ ಪ್ರದೇಶವು ಬಹಳ ಹಿಂದಿನಿಂದಲೂ ಅಭಿವೃದ್ಧಿಯಿಂದ ವಂಚಿತವಾಗಿದೆ. ಆದರೆ, ಮುಂದಿನ ವರ್ಷ ಮಾರ್ಚ್ ೩೧ ರ ನಂತರ, ಉಗ್ರಗಾಮಿಗಳು ಬಸ್ತರ್‌ನ ಅಭಿವೃದ್ಧಿಯನ್ನು ತಡೆಯಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು. ಇದೇ ಸಂದರ್ಭದಲ್ಲಿ, ಕೇಂದ್ರ ಗೃಹ ಸಚಿವರು, ಮುಖ್ಯಮಂತ್ರಿ ಗ್ರಾಮೀಣ ಬಸ್ ಸೇವಾ ಯೋಜನೆಯನ್ನು ಪ್ರಾರಂಭಿಸಿದರು. ಈ ಯೋಜನೆಯಡಿಯಲ್ಲಿ, ಬಸ್ತರ್ ಮತ್ತು ಸುರ್ಗುಜಾ ವಿಭಾಗಗಳಾದ್ಯಂತ ೩೪ ಮಾರ್ಗಗಳಲ್ಲಿ ಬಸ್ ಸೇವೆಗಳನ್ನು ಒದಗಿಸಲಾಗುವುದು. ಇದು ಸುಮಾರು ೨೫೦ ಹಳ್ಳಿಗಳನ್ನು ನಿಯಮಿತ ಸಾರಿಗೆ ಸೌಲಭ್ಯಗಳೊಂದಿಗೆ ಸಂಪರ್ಕಿಸಲಾಗುತ್ತದೆ. ಇದೇ ವೇಳೆ ಛತ್ತೀಸ್‌ಗಢ ಸರ್ಕಾರದ ಮಹಾತಾರಿ ವಂದನ ಯೋಜನೆಯ ೨೦ ನೇ ಕಂತಿನ ರೂಪದಲ್ಲಿ ೬೦ ಲಕ್ಷ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ೬೦೦ ಕೋಟಿ ರೂಪಾಯಿಗಳನ್ನು ಸಚಿವ ಅಮಿತ್ ಶಾ ವರ್ಗಾಯಿಸಿದರು.

><><><><

ಕೇಂದ್ರ ಸರ್ಕಾರವು ರಾಷ್ಟ್ರೀಯ ಹೆದ್ದಾರಿ ಶುಲ್ಕ-ದರಗಳು ಮತ್ತು ಸಂಗ್ರಹದ ನಿರ್ಣಯ ನಿಯಮಗಳು, ೨೦೦೮ ಅನ್ನು ತಿದ್ದುಪಡಿ ಮಾಡಿದೆ. ಹೊಸ ನಿಯಮದಡಿಯಲ್ಲಿ, ಮಾನ್ಯವಾದ, ಕ್ರಿಯಾತ್ಮಕ ಫಾಸ್ಟ್‌ಟ್ಯಾಗ್ ಇಲ್ಲದೆ, ಶುಲ್ಕ ಪ್ಲಾಜಾವನ್ನು ಪ್ರವೇಶಿಸುವ ವಾಹನಗಳಿಗೆ, ಶುಲ್ಕ ಪಾವತಿಯನ್ನು ನಗದು ರೂಪದಲ್ಲಿ ಮಾಡಿದರೆ, ಅನ್ವಯವಾಗುವ ಬಳಕೆದಾರ ಶುಲ್ಕದ ಎರಡು ಪಟ್ಟು ಶುಲ್ಕ ವಿಧಿಸಲಾಗುತ್ತದೆ. ಏಕೀಕೃತ ಪಾವತಿ ಇಂಟರ್ಫೇಸ್ ಮೂಲಕ ಶುಲ್ಕವನ್ನು ಪಾವತಿಸಲು ಆಯ್ಕೆ ಮಾಡುವ ಬಳಕೆದಾರರಿಗೆ, ಆ ವರ್ಗದ ವಾಹನಕ್ಕೆ ಅನ್ವಯವಾಗುವ ಬಳಕೆದಾರ ಶುಲ್ಕದ ೧.೨೫ ಪಟ್ಟು ಮಾತ್ರ ವಿಧಿಸಲಾಗುತ್ತದೆ. ಹೊಸ ನಿಯಮಗಳು ಮುಂದಿನ ತಿಂಗಳ ೧೫ ರಿಂದ ಜಾರಿಗೆ ಬರಲಿವೆ

><><><><

ಕೇಂದ್ರೀಯ ತನಿಖಾ ದಳ-ಸಿಬಿಐ, ಎಚ್‌ಪಿಜೆಡ್ ಕ್ರಿಪ್ಟೋ ಕರೆನ್ಸಿ ಟೋಕನ್ ವಂಚನೆ ಪ್ರಕರಣದಲ್ಲಿ ಶೋಧ ನಡೆಸಿದ್ದು, ನೂರಾರು ಕೋಟಿ ರೂಪಾಯಿಗಳ ದೊಡ್ಡ ಪ್ರಮಾಣದ ಅಂತಾರಾಷ್ಟ್ರೀಯ ಸೈಬರ್ ವಂಚನೆಯನ್ನು ಬಹಿರಂಗಪಡಿಸಿದೆ. ಚಕ್ರ-ವಿ ಕಾರ್ಯಾಚರಣೆಯ ಭಾಗವಾಗಿ ದೆಹಲಿ, ಹೈದರಾಬಾದ್ ಮತ್ತು ಬೆಂಗಳೂರಿನಾದ್ಯಂತ ಏಳು ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆಗಳನ್ನು ನಡೆಸಲಾಯಿತು. ಕಾರ್ಯಾಚರಣೆಯ ಸಮಯದಲ್ಲಿ, ಡಿಜಿಟಲ್ ಪುರಾವೆಗಳು ಮತ್ತು ಹಣಕಾಸು ದಾಖಲೆಗಳನ್ನು ವಶಪಡಿಸಿಕೊಳ್ಳಲಾಯಿತು. ಈ ಪ್ರಕರಣದಲ್ಲಿ ಸಿಬಿಐ, ಐದು ಆರೋಪಿಗಳನ್ನು ಸಹ ಬಂಧಿಸಿದೆ.

><><><><

ನಿರ್ಣಾಯಕ ಖನಿಜ ಮರುಬಳಕೆಯನ್ನು ಉತ್ತೇಜಿಸಲು ಹದಿನೈದು ನೂರು ಕೋಟಿ ರೂಪಾಯಿಗಳ ಪ್ರೋತ್ಸಾಹಕ ಯೋಜನೆಗೆ ಗಣಿ ಸಚಿವಾಲಯ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಿದೆ. ಇ-ತ್ಯಾಜ್ಯ, ಬಳಸಿದ ಲಿಥಿಯಂ-ಐಯಾನ್ ಬ್ಯಾಟರಿಗಳು ಮತ್ತು ಇತರೆ ಸ್ಕ್ಯಾಪ್ ವಸ್ತುಗಳಿಂದ ನಿರ್ಣಾಯಕ ಖನಿಜಗಳ ಉತ್ಪಾದನೆಗಾಗಿ ರಾಷ್ಟ್ರದ ಮರುಬಳಕೆ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವುದು ಈ ಯೋಜನೆಯ ಗುರಿಯಾಗಿದೆ. ಹೊಸ ಸೌಲಭ್ಯಗಳನ್ನು ಸ್ಥಾಪಿಸುವಲ್ಲಿ ಅಥವಾ ಅಸ್ತಿತ್ವದಲ್ಲಿರುವ ಸೌಲಭ್ಯಗಳನ್ನು ವಿಸ್ತರಿಸುವಲ್ಲಿ ಸ್ಟಾರ್ಟ್‌ಅಪ್‌ಗಳು ಸೇರಿದಂತೆ ದೊಡ್ಡ ಮತ್ತು ಸಣ್ಣ ಮರುಬಳಕೆದಾರರನ್ನು ಬೆಂಬಲಿಸಲು ಈ ಯೋಜನೆಯು ಅವಕಾಶವನ್ನು ಹೊಂದಿದೆ. ಪ್ರಯೋಜನಗಳನ್ನು ಪಡೆಯಲು ಅರ್ಜಿ ಮುಂದಿನ ವರ್ಷ ಏಪ್ರಿಲ್ ೧ ರವರೆಗೆ ಆರು ತಿಂಗಳವರೆಗೆ ತೆರೆದಿರುತ್ತದೆ.

><><><><

ಭಾರತ ತಂಡ, ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಮೊದಲ ಟೆಸ್ಟ್‌ನಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಇನ್ನಿಂಗ್ಸ್ ಮತ್ತು ೧೪೦ ರನ್‌ಗಳಿಂದ ಸೋಲಿಸಿದೆ. ಪ್ರಬಲ ಆಲ್‌ರೌಂಡ್ ಪ್ರದರ್ಶನದ ನಂತರ ಎರಡು ಪಂದ್ಯಗಳ ಸರಣಿಯಲ್ಲಿ ೧-೦ ಮುನ್ನಡೆ ಸಾಧಿಸಿತು. ಮೊದಲ ಇನ್ನಿಂಗ್ಸ್‌ನಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ೧೬೨ ರನ್‌ಗಳಿಗೆ ಆಲೌಟ್ ಮಾಡಿದ ನಂತರ, ಕೆ.ಎಲ್.ರಾಹುಲ್, ರವೀಂದ್ರ ಜಡೇಜಾ ಮತ್ತು ಧ್ರುವ್ ಜುರೆಲ್ ಅವರ ಶತಕಗಳ ನೆರವಿನಿಂದ ಭಾರತವು ೪೪೮ ರನ್‌ಗಳಿಗೆ ತನ್ನ ಇನ್ನಿಂಗ್ಸ್ ಅನ್ನು ಡಿಕ್ಲೇರ್ ಮಾಡಿತು. ವೆಸ್ಟ್ ಇಂಡೀಸ್ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೧೪೬ ರನ್‌ಗಳಿಗೆ ಆಲೌಟ್ ಆಯಿತು. ರವೀಂದ್ರ ಜಡೇಜಾ ೪ ವಿಕೆಟ್, ಮೊಹಮ್ಮದ್ ಸಿರಾಜ್ ೩ ವಿಕೆಟ್ ಮತ್ತು ಕುಲದೀಪ್ ಯಾದವ್ ೨ ವಿಕೆಟ್ ಪಡೆಯುವ ಮೂಲಕ

ಭಾರತದ ಗೆಲುವಿಗೆ ಕಾರಣರಾದರು. ಸರಣಿಯ ಎರಡನೇ ಪಂದ್ಯವು ಈ ತಿಂಗಳ ೧೦ ರಿಂದ ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿದೆ.

><><><><

ಆಸ್ಟ್ರೇಲಿಯಾದಲ್ಲಿ ನಡೆಯಲಿರುವ ಮೂರು ಪಂದ್ಯಗಳ ಏಕದಿನ ಸರಣಿಗೆ ಶುಭಮನ್ ಗಿಲ್ ಅವರನ್ನು ಭಾರತದ ಹೊಸ ಏಕದಿನ ನಾಯಕರನ್ನಾಗಿ ನೇಮಿಸಲಾಗಿದೆ. ಟೆಸ್ಟ್ ಮತ್ತು ಟಿ-೨೦ ಸ್ವರೂಪಗಳಲ್ಲಿ ನಾಯಕತ್ವ ವಹಿಸಿದ್ದ ಗಿಲ್ ಅವರು, ಏಕದಿನ ತಂಡದ ನಾಯಕರಾಗಿ ಇದು ಅವರ ಚೊಚ್ಚಲ ಸರಣಿಯಾಗಿದೆ. ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ, ಏಕದಿನ ಪಂದ್ಯಗಳ ನಂತರ ನಡೆಯಲಿರುವ ಐದು ಪಂದ್ಯಗಳ ಟಿ-೨೦ ಸರಣಿಗೆ ತಂಡವನ್ನು ಸಹ ಪ್ರಕಟಿಸಿದೆ. ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ಭಾರತದ ಏಕದಿನ ತಂಡದಲ್ಲಿ ಶುಭಮನ್ ಗಿಲ್, ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಅಕ್ಷರ್ ಪಟೇಲ್, ಕೆ.ಎಲ್.ರಾಹುಲ್, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್, ಕುಲದೀಪ್ ಯಾದವ್, ಹರ್ಷಿತ್ ರಾಣಾ, ಮೊಹಮ್ಮದ್ ಸಿರಾಜ್, ಅರ್ಶ್‌ದೀಪ್ ಸಿಂಗ್, ಪ್ರಸಿದ್ಧ್ ಕೃಷ್ಣ, ಧ್ರುವ್ ಜುರೆಲ್, ಯಶಸ್ವಿ ಜೈಸ್ವಾಲ್ ಸೇರಿದ್ದಾರೆ.

><><><><

ಇಂದು ಸ್ವಾತಂತ್ರ್ಯ ಹೋರಾಟಗಾರರಾದ ತಿರುಪ್ಪೂರು ಕುಮಾರನ್ ಮತ್ತು ಸುಬ್ರಮಣಿಯ ಶಿವ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ಸಲ್ಲಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ತಮಿಳುನಾಡಿನ ಇಬ್ಬರೂ ನಾಯಕರು ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ತಮ್ಮ ಜೀವನವನ್ನು ಮುಡಿಪಾಗಿಟ್ಟರು ಮತ್ತು ಜನರಲ್ಲಿ ರಾಷ್ಟ್ರೀಯತೆಯ ಮನೋಭಾವವನ್ನು ಪ್ರೇರೇಪಿಸಿದರು ಎಂದು ಹೇಳಿದ್ದಾರೆ.

><><><><

ವಿಜ್ಞಾನ ಮತ್ತು ತಂತ್ರಜ್ಞಾನದ ಅಂತಾರಾಷ್ಟ್ರೀಯ ಸಂಭ್ರಮಾಚರಣೆಯಾಗಿ ಮತ್ತು ಮನುಕುಲಕ್ಕೆ ನೀಡಿದ ಕೊಡುಗೆಯ ಸ್ಮರಣಾರ್ಥ ಜಗತ್ತಿನಾದ್ಯಂತ ಇಂದಿನಿಂದ ಇದೇ ೧೦ರ ವರೆಗೆ ವಿಶ್ವ ಬಾಹ್ಯಾಕಾಶ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಈ ಸಪ್ತಾಹ ಅಕ್ಟೋಬರ್ ೪ರ ಮಾನವನಿರ್ಮಿತ ಮೊದಲ ಕೃತಕ ಉಪಗ್ರಹ ಸ್ಪುಟ್ನಿಕ್-೧ರ ಉಡಾವಣೆ ಮತ್ತು ಅಕ್ಟೋಬರ್ ೧೦ರ ಬಾಹ್ಯಾಕಾಶ ಒಪ್ಪಂದಕ್ಕೆ ಸಹಿ ಹಾಕಿದ ಸ್ಮರಣಾರ್ಥ ಪ್ರಮುಖವಾಗಿದೆ. ಇದರ ಅಂಗವಾಗಿ ಜಗತ್ತಿನಾದ್ಯಂತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ವಿಜ್ಞಾನಾಭಿಮಾನಿಗಳಿಗೆ ಇಂದು ಮತ್ತು ನಾಳೆ ವಿಶೇಷ

ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸ್ಪರ್ಧೆಗಳು, ಕಾರ್ಯಾಗಾರಗಳು ಹಾಗೂ ಸಾರ್ವಜನಿಕರಿಗೆ ಉಪನ್ಯಾಸಗಳ ಮೂಲಕ ಬಾಹ್ಯಾಕಾಶ ವಿಜ್ಞಾನವನ್ನು ಹತ್ತಿರದಿಂದ ಅರಿಯುವ ಅವಕಾಶ ಕಲ್ಪಿಸಲಾಗಿದೆ.

**><><>END<><><**